# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಂಖ್ಯೆ:** ಬಿ12(5)ಪಿಆರ್/42/2018-19

ಆಯುಕ್ತರವರ ಕಛೇರಿ
ಮಹಾನಗರ ಪಾಲಿಕೆ ಕಛೇರಿಗಳು
ಬೆಂಗಳೂರು, ದಿನಾಂಕ: 14-11-2018

## ಸುತ್ತೋಲೆ

**ವಿಷಯ:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಂಬಂಧಿಸಿದ ಎಲ್ಲಾ ಕಡತ/ಪತ್ರಗಳನ್ನು ಸಮುಚಿತ ಮಾರ್ಗದಲ್ಲಿ (through proper channel) ಸಲ್ಲಿಸುವ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಡತವು ಕಛೇರಿ ವ್ಯವಹಾರಗಳ ಒಂದು ಪ್ರಮುಖ ದಾಖಲೆಯಾಗಿದ್ದು, ಪತ್ರಗಳು, ಅರ್ಜಿಗಳು, ಮನವಿಗಳು ಇತರೇ ವಿಷಯಕ್ಕೆ ಸಂಬಂಧಿಸಿದಂತೆ ಕಡತಗಳನ್ನು ನಿರ್ವಹಣೆಯ ಸಂಬಂಧ ಸ್ಪಷ್ಟವಾದ ಮಾರ್ಗಸೂಚಿಗಳಿದ್ದು, ಅದರಂತೆ ಸಾಧಾರಣ ಕಡತಗಳು ಹಾಗೂ ರಹಸ್ಯ ಕಡತಗಳು ಸಾರ್ವಜನಿಕ ಹಿತದೃಷ್ಟಿಯಿಂದ ಅವುಗಳನ್ನು ಗೌಪ್ಯವಾಗಿ ಇಟ್ಟು, ಅಗತ್ಯವೆಂದು ಕಂಡುಬಂದಾಗ ಪೂರ್ವಭಾವಿ ಅನುಮತಿಯೊಂದಿಗೆ ಕಡತವನ್ನು ಮಂಡಿಸಬೇಕಾಗಿರುತ್ತದೆ. ಆದರೆ, ಪಾಲಿಕೆಯಲ್ಲಿ ಕಡತಗಳನ್ನು ಸಲ್ಲಿಸುವ ಸಂಬಂಧ ಇತರೇ ವ್ಯಕ್ತಿಗಳು ಕಡತಗಳನ್ನು ಕೈಯಲ್ಲಿ ತೆಗೆದುಕೊಂಡು ಓಡಾಡುತ್ತಿರುವುದು ನನ್ನ ಗಮನಕ್ಕೆ ಬಂದಿರುತ್ತದೆ. ಇದರಿಂದ ಪಾಲಿಕೆಯ ಆಡಳಿತಾತ್ಮಕ ಕೆಲಸಕಾರ್ಯಗಳಲ್ಲಿ ಇತರೇ ವ್ಯಕ್ತಿಗಳು ಒತ್ತಡಗಳನ್ನು ಹೇರುತ್ತಾ, ಕಾರ್ಯನಿರ್ವಹಣೆ ಇತ್ಯರ್ಥವು ತೊಂದರೆದಾಯಕವಾಗಿರುವುದನ್ನು ಗಮನಿಸಲಾಗಿದೆ.

ಆದ್ದರಿಂದ, ಕಡತಗಳ ನಿರ್ವಹಣೆ ಮತ್ತು ವಿಲೇವಾರಿಯಲ್ಲಿ ನಿರ್ಲಕ್ಷ್ಯತೆ ಅಕ್ಷಮ್ಯವಾದದ್ದು. ಕಡತ ನಿರ್ವಹಣೆಯ ನೇರ ಜವಾಬ್ದಾರಿಯ ಸಂಬಂಧಪಟ್ಟ ವಿಷಯ ನಿರ್ವಾಹಕರಾಗಿದ್ದು, ಇದರ ಮೇಲುಸ್ತುವಾರಿ ಜವಾಬ್ದಾರಿ ಸಂಬಂಧಪಟ್ಟ ವ್ಯವಸ್ಥಾಪಕರು ಹಾಗೂ ಕಛೇರಿಯ ಬಟವಾಡೆ ಅಧಿಕಾರಿಗಳಾಗಿರುತ್ತಾರೆ. ಇನ್ನು ಮುಂದೆ ಎಲ್ಲಾ ಬಟವಾಡೆ ಅಧಿಕಾರಿಗಳು ತಮ್ಮ ಕಛೇರಿಗಳಲ್ಲಿ ಎಲ್ಲಾ ಕಡತ/ಪತ್ರಗಳ ಚಲನವಲನ ವಹಿಯನ್ನು ಕಟ್ಟುನಿಟ್ಟಾಗಿ ನಿರ್ವಹಿಸಿ ಕಡತದ ನಿರ್ಗಮನ/ಆಗಮನಗಳನ್ನು ಸರಿಯಾಗಿ ದಾಖಲಿಸಿ ಕಡತವು ಕಾಣೆಯಾಗದಂತೆ ಎಚ್ಚರಿಕೆ ಹಾಗೂ ನಿಗಾ ವಹಿಸಿ ನೊಂದಾವಣೆ ಪುಸ್ತಕದಲ್ಲಿ ನಮೂದಿಸಿ ಸಂಖ್ಯೆಯೊಂದಿಗೆ ಸಮುಚಿತ ಮಾರ್ಗದಲ್ಲಿಯೇ ಮಾತ್ರ ಕಡತಗಳನ್ನು ಸಲ್ಲಿಸಲು ಸ್ಪಷ್ಟ ನಿರ್ದೇಶನವನ್ನು ಈ ಮೂಲಕ ನೀಡಲಾಗಿದೆ. ಯಾವುದೇ ಇತರೇ ವ್ಯಕ್ತಿಗಳು ಕಡತಗಳನ್ನು ಕೈಯಲ್ಲಿ ತೆಗೆದುಕೊಂಡು ಓಡಾಡುತ್ತಿರುವುದು ಕಂಡುಬಂದಲ್ಲಿ ಸಂಬಂಧಪಟ್ಟ ವಿಷಯ ನಿರ್ವಾಹಕರು, ವ್ಯವಸ್ಥಾಪಕರು ಹಾಗೂ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲಾಗುವುದು.

ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:** ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.
: ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ
: ವಿಶೇಷ ಆಯುಕ್ತರು(ಯೋಜನೆ/ಹಣಕಾಸು) ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.

......2

: ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.

: ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

: ಎಲ್ಲಾ ವಲಯ ಅಪರ / ಜಂಟಿ ಆಯುಕ್ತರು / ಉಪ ಆಯುಕ್ತರುಗಳಿಗೆ ಕಳುಹಿಸಿದೆ.

: ಕೌನ್ಸಿಲ್ ಕಾರ್ಯದರ್ಶಿ, ರವರಿಗೆ ಕಳುಹಿಸುತ್ತಾ, ಆಡಳಿತ ಪಕ್ಷದ ನಾಯಕರು, ವಿರೋಧ ಪಕ್ಷದ ನಾಯಕರು, ಜೆ.ಡಿ.ಎಸ್. ಪಕ್ಷದ ನಾಯಕರು ಹಾಗೂ ಎಲ್ಲಾ ಸ್ಥಾಯಿ ಸಮಿತಿ ಅಧ್ಯಕ್ಷರು ರವರು ಹಾಗೂ ಎಲ್ಲಾ ಸದಸ್ಯರುಗಳ ಅವಗಾಹನೆಗೆ ತರಲು ಕಳುಹಿಸಿದೆ.

: ಮಾಹಿತಿ ತಂತ್ರಜ್ಞಾನ ಸಲಹೆಗಾರರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

: ಸಂಬಂಧಪಟ್ಟ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಕಳುಹಿಸಿದೆ.

: ಕಛೇರಿ ಪ್ರತಿ